KARNATAKA SUCCESS NO 1
Kannada Daily

ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.

Volume: 02 Issue-113
ಭಾನುವಾರ 02 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ಮಧುಗಿರಿ ತಾಲ್ಲೋಕು ಬಂದ್ರೆಹಳ್ಳಿ ಗ್ರಾಮದಲ್ಲಿ ಕ್ಷೇಮಾ ಅರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣದ ಶಂಕಯಸ್ಥಾಪನೆಯನ್ನು ಪಿ ಎಲ್ ಡಿ ಬ್ಯಾಂಕ್ ಅದ್ಯಕ್ಷ ಬೈರಪ್ಪ ನೆರವೇರಿಸಿದರು ಗ್ರಾಮ ಪಂಚಾಯಿತಿ ಅದ್ಯಕ್ಷರಾದ ನಾಗಭೂಷಣ ಡಿಸಿಸಿ ಬ್ಯಾಂಕ್ ನಿರ್ದಶಕ ಬಿ ನಾಗೇಶ ಬಾಬು ಮಾಜಿ ಎ ಪಿಎಮ್ ಸಿ ಅದ್ಯಕ್ಷ ಮರಿಯಣ್ಣ ಮಾಜಿ ಉಪಾದ್ಯಕ್ಷ ಕೊಂಡವಾಡಿ ರಾಜಕುಮಾರ್ ಉಪನ್ಯಾಸಕ ಮಹಲಿಂಗೇಶ್.ಸಿ ಕುಮಾರ್ ಬಿ ಜಿ ಮಂಜುನಾಥ ಪಾಪಯ್ಯ ಸದಾನಂದದಾಸ್ ಪಿಡಿಒ ರವಿಚಂದ್ರ ವಿ ಎಸ್ ಎಸ್ ಎನ್ ನಿರ್ದಶಕ ರಂಗನಾಥ ಮತ್ತಿತರರು ಹಾಜರಿದ್ದರು

## 'ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನ ಕೇವಲ ಪ.ಜಾತಿ-ಪಂಗಡಗಳ ಕಲ್ಯಾಣಕ್ಕಾಗಿ ಬಳಕೆಯಾಗಲಿ': ವಿರೋಧಪಕ್ಷದ ಉಪ ನಾಯಕ ಅರವಿಂದ್ ಬೆಲ್ಲದ್

*ತುಮಕೂರು: ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯ ಅನುದಾನವನ್ನು ಕೇವಲ ಪರಿಶಿಷ್ಟ ಜಾತಿ, ಪಂಗಡ ಸಮುದಾಯಗಳ ಕಲ್ಯಾಣಕ್ಕಾಗಿ ಮಾತ್ರ ಬಳಸಬೇಕು. ಆದರೆ, ಕಾಂಗ್ರೆಸ್ ಸರ್ಕಾರ ಎಸ್‌ಸಿಪಿ, ಟಿಎಸ್‌ಪಿ ಯೋಜನೆಯ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ಈ ವರ್ಗಗಳಿಗೆ ಅನ್ಯಾಯ ಮಾಡಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್ ಹರಿಹಾಯ್ದರು.*



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ 16 ಬಜೆಟ್ ಮಂಡಿಸಿದ್ದು, ಇದೀಗ 17ನೇ ಬಜೆಟ್ ಮಂಡಿಸಲು ಸಿದ್ದರಾಗಿದ್ದಾರೆ. ಆರ್ಥಿಕ ತಜ್ಞ ಎಂದು ಹೇಳಿಕೊಳ್ಳುವ ಮುಖ್ಯ ಮಂತ್ರಿಗಳು ಈ ಹಿಂದೆ ಎಸ್ಸಿ, ಎಸ್ಟಿ ಸಮುದಾಯ ಗಳ ಯೋಜನೆಗೆ ಮೀಸಲಿಟ್ಟ ಅನುದಾನವನ್ನು ಸಂಪೂರ್ಣವಾಗಿ ಬಿಡುಗಡೆ ಮಾಡದೆ ಸಮುದಾಯಕ್ಕೆ ಮೋಸ ಮಾಡಿದ್ದಾರೆ ಎಂದು ಅವರು ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು.

ಕಾಂಗ್ರೆಸ್ ಸರ್ಕಾರಕ್ಕೆ ಬಡವರು, ದಲಿತರ ಬಗ್ಗೆ ಕಾಳಜಿ ಇಲ್ಲ, ಬದಲಾಗಿ ನಿಷ್ಕಾಳಜಿ ಹೊಂದಿದೆ. ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದಾಗಿನಿಂದ ಸಮುದಾಯದ ಅಭಿವೃದ್ಧಿಗೆ ಒತ್ತು ಕೊಟ್ಟಿಲ್ಲ. ಗ್ಯಾರಂಟಿಗಾಗಿ ದಲಿತ ಸಮುದಾಯದ ಹಣವನ್ನು ಬಳಕೆ ಮಾಡಿಕೊಳ್ಳುವ ಮೂಲಕ ಈ ವರ್ಗಗಳಿಗೆ ಅನ್ಯಾಯ ಮಾಡಿದ್ದಾರೆ ಎಂದು ಕಿಡಿಕಾರಿದರು.

2024-25ನೇ ಸಾಲಿನಲ್ಲಿ ಮಂಡಿಸಿದ್ದ ಬಜೆಟ್‌ನ ಅನುದಾನ ಸಮರ್ಪಕವಾಗಿ ಬಿಡುಗಡೆಯಾಗಿಲ್ಲ. ಎಸ್ಸಿ-ಎಸ್ಟಿ ಸಮುದಾಯದ ಕಲ್ಯಾಣಕ್ಕಾಗಿ 39914 ಕೋಟಿ ಕೊಡುತ್ತೇವೆ ಎಂದಿದ್ದರು. ಆದರೆ, 24404 ಕೋಟಿ ಖರ್ಚು ಮಾಡಿದ್ದಾರೆ. ಉಳಿದ ಹಣವನ್ನು ಇನ್ನೊಂದು ತಿಂಗಳಲ್ಲಿ ಖರ್ಚು ಮಾಡಲಿಕ್ಕೆ ಸಾಧ್ಯವಾಗುತ್ತಾ ಈ ಸರ್ಕಾರಕ್ಕೆ ಎಂದು ಅವರು ಪ್ರಶ್ನಿಸಿದರು. .

ದಲಿತರ ಹಣ ತೆಗೆದು ಗ್ಯಾರಂಟಿಗೆ ಬಳಸುತ್ತೀರಾ? ಅಲ್ಪಸಂಖ್ಯಾತರ ದುಡ್ಡನ್ನು ಗ್ಯಾರಂಟಿಗೆ ಬಳಸಿಕೊಳ್ಳುವುದಿಲ್ಲ. ಎಸ್‌ಇಪಿ, ಟಿಎಸ್‌ಪಿ ಯೋಜನೆಯ ಹಣವನ್ನೇ ಏಕೆ ಬಳಸಿಕೊಳ್ಳುತ್ತೀರಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೋಲಾರ ಮಾಜಿ ಸಂಸದ ಮುನಿಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷವಾಗುತ್ತಿದೆ. ಆದರೆ, ಈವರೆಗೆ ಯಾವುದೇ ಅಭಿವೃದ್ಧಿ ಕಾರ್ಯ ನಡೆಯುತ್ತಿಲ್ಲ. ಒಂದು ಕಿ.ಮೀ. ರಸ್ತೆ ಡಾಂಬರೀಕರಣವೂ ಆಗಿಲ್ಲ. ಗ್ಯಾರಂಟಿ ಯೋಜನೆ ಮಾತ್ರ ಈ ಸರ್ಕಾರಕ್ಕೆ ನೆಪವಾಗಿದೆ ಎಂದು ಟೀಕಿಸಿದರು.

ಕಾಂಗ್ರೆಸ್ ಪಕ್ಷದಲ್ಲಿ ಕೆಲ ನಾಯಕರು ಮುಖ್ಯಮಂತ್ರಿ ಕುರ್ಚಿಗಾಗಿ ಹೊಸ ಬಟ್ಟೆ ಒಲಿಸಿಕೊಂಡು ದೇವಾಲಯಗಳಲ್ಲಿ ಪೂಜೆ ಮಾಡಿಸಿಕೊಳ್ಳುತ್ತಿದ್ದಾರೆ. ಸಿದ್ದರಾಮಯ್ಯ ಅವರು ಕಾಲು ಮುರಿದುಕೊಳ್ಳುವಂತೆ ಮಾಡಿದ್ದಾರೆ. ನಾವು ಸಿಎಂ ಆಗಬೇಕು ಎಂದು ಸತೀಶ್ ಜಾರಕಿಹೊಳಿ, ಡಿ.ಕೆ. ಶಿವಕುಮಾರ್ ಓಡಾಡುತ್ತಿದ್ದಾರೆ ಎಂದು ದೂರಿದರು.

ಬಿಜೆಪಿ ಸರ್ಕಾರ ಇದ್ದಾಗ ಅಭಿವೃದ್ಧಿ ಜತೆಗೆ ದಲಿತ ವರ್ಗದ ಸಮುದಾಯಗಳಿಗೂ ಒತ್ತು ನೀಡಲಾಗಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಅದನ್ನು ಮಾಡುತ್ತಿಲ್ಲ. ದಲಿತ ವಿರೋಧಿ ನೀತಿಯನ್ನು ಅನುಸರಿಸುತ್ತಿದೆ ಎಂದರು.

ದೇವಸ್ಥಾನದಲ್ಲಿ ಹೆಚ್ಚು ಹೆಚ್ಚು ಹುಂಡಿಗಳನ್ನಿಟ್ಟು, ಹಣ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರ ಏಕೆ ಮಸೀದಿಗಳಲ್ಲಿ ಹೆಚ್ಚು ಹೆಚ್ಚು ಹುಂಡಿಗಳನ್ನು ಇಡುತ್ತಿಲ್ಲ. ವಾಯು ವಿಹಾರಿಗಳು ಸಹ ಹಣ ಕೊಡಬೇಕು ಅಂದರೆ ಕಾಂಗ್ರೆಸ್ ಸರ್ಕಾರ ಸಂಪೂರ್ಣ ದಿವಾಳಿಯಾಗಿದೆ ಅವರು ವಾಗ್ದಾಳಿ ನಡೆಸಿದರು.

ಪತ್ರಿಕಾಗೋಷ್ಠಿಯಲ್ಲಿ ಶಾಸಕ ಜ್ಯೋತಿಗಣೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ರವಿಶಂಕರ್ ಹೆಬ್ಬಾಕ, ಮುಖಂಡರಾದ ಬ್ಯಾಟರಂಗೇಗೌಡ, ಅಂಬಿಕಾ ಹುಲಿನಾಯ್ಕರ್, ವೈ.ಹೆಚ್.ಹುಚ್ಚಯ್ಯ, ದಿಲೀಪ್‌ಕುಮಾರ್, ಡಾ. ನರೇಂದ್ರ ರಂಗಪ್ಪ, ಆಂಜಿನಪ್ಪ, ಗಂಗರಾಜು, ವೆಂಕಟೇಶ್, ಲೋಹಿತ್, ಜಗದೀಶ್ ಮತ್ತಿತರರು ಉಪಸ್ಥಿತರಿದ್ದರು.



ತುಮಕೂರಿನ ಸಿದ್ದಗಂಗಾ ಮಠದ ಶ್ರೀಸಿದ್ದಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಸಿದ್ದಗಂಗಾ ಮಠದ ಆವರಣದಲ್ಲಿ ಬೆಳ್ಳಿ ಪಲ್ಲಕ್ಕಿ ಉತ್ಸವ ನಡೆಯಿತು. ನಾಡಿನ ವಿವಿಧೆಡೆಗಳಿಂದ ಬೆಳ್ಳಿ ಪಲ್ಲಕ್ಕಿ ಉತ್ಸವ ನೋಡಲು ಲಕ್ಷಾಂತರ ಭಕ್ತರು ಆಗಮಿಸಿದ್ದು, ಹರಗುರು ಚರಮೂರ್ತಿಗಳು, ಭಕ್ತರು ಭಾಗವಹಿಸಿದ್ದರು. ಬೆಳ್ಳಿ ಪಲ್ಲಕ್ಕಿ ಉತ್ಸವದ ನಂತರ ಅಕರ್ಷಕ ಸಿಡ್ಡಿ ಮದ್ದಿನ ಪ್ರದರ್ಶನ ಸಹ ಜರುಗಿತು.

### ಕೋರಾ ಗ್ರಾಮದಲ್ಲಿ ತುಮಕೂರು ತಾಲ್ಲೂಕು ಏಳನೆಯ ಕನ್ನಡ ಸಾಹಿತ್ಯ ಸಮ್ಮೇಳನ

## 'ಕನ್ನಡ ಅನ್ನದ ಭಾಷೆಯಲ್ಲ' ಎಂಬುದು ಭ್ರಮೆ: ಮುಕುಂದರಾಜ್

ತುಮಕೂರು: ಕನ್ನಡ ಮಾಧ್ಯಮದಲ್ಲಿ ಓದಿದವರಿಗೆ ಉದ್ಯೋಗ ದೊರಕುವುದಿಲ್ಲ ಎಂಬ ಭ್ರಮೆಯಲ್ಲಿ ನಾವಿಂದು ಇದ್ದೇವೆ. ಸಾವಿರಾರು ವರ್ಷಗಳಿಂದಲೂ ಕನ್ನಡ ಭಾಷಿಕರು ಉದ್ಯೋಗ ಮಾಡುತ್ತಲೇ ಬರುತ್ತಿದ್ದಾರೆ. ಕನ್ನಡ ಭಾಷೆ ಬರುವವನಿಗೆ ಅದು ಒಂದಲ್ಲಾ ಒಂದು ರೀತಿ ಶಕ್ತಿಯನ್ನು ತುಂಬುತ್ತಲೇ ಇದೆ. ನಮ್ಮ ಜನ ಯಾಕೆ ಈ ರೀತಿ ಚಿಂತಿಸುತ್ತಾರೋ. ಇಂತಹ ಮನೋಭಾವನೆಯನ್ನು ಕನ್ನಡಿಗರೆಲ್ಲ ಬಿಟ್ಟಬಿಡಬೇಕು. 20ನೇ ಶತಮಾನದಲ್ಲಿ ಬದುಕಿ ಕನ್ನಡದಲ್ಲಿ ಸಾಹಿತ್ಯ ರಚನೆ ಮಾಡಿದ ವಿದ್ವಾಂಸರೆಲ್ಲ ಕನ್ನಡ ಮಾಧ್ಯಮದಲ್ಲಿಯೇ ಓದಿ ಬಂದವರು ಎಂಬುದನ್ನು ನಾವೆಲ್ಲಾ ನೆನಪಿನಲ್ಲಿಟ್ಟು ಕೊಳ್ಳಬೇಕು. ಇಂತಹ ಕೀಳರಿಮೆಯ ಮನೊಭಾವವನ್ನು ಕನ್ನಡಿಗರು ಬಿಡಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ



ಎಲ್.ಎನ್. ಮುಕುಂದರಾಜ್ ಅಭಿಪ್ರಾಯಪಟ್ಟರು.

ಅವರು ಕೋರಾ ಗ್ರಾಮದಲ್ಲಿ ಏರ್ಪಡಿಸಿದ್ದ ತುಮಕೂರು ತಾಲ್ಲೂಕು ಏಳನೆಯ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಬದಲಾದ ಪರಿಸ್ಥಿತಿಯಲ್ಲಿ ಲೇಖಕರು ಮುಕ್ತವಾಗಿ ಬರೆಯಲೂ, ಮಾತನಾಡಲೂ ಆಗದ ಭಯದ ವಾತಾವರಣದಲ್ಲಿ ಬದುಕುತ್ತಿದ್ದಾರೆ. ಇಂದು ತರುಣ ಬರಹಗಾರರಿಗೆ ನೈತಿಕ ಸ್ಥೈರ್ಯವನ್ನು ತುಂಬುವಂತಹ ಸಾಹಿತಿಗಳ ಕೊರತೆ ಕಂಡುಬರುತ್ತಿದೆ. ಆದ್ದರಿಂದಲೇ ತರುಣ ಬರಹಗಾರರು ಆತ್ಮವಿಶ್ವಾಸದಿಂದ ಸುರಕ್ಷಿತವಾಗಿ ಬರೆಯಲು ಸಾಧ್ಯವಾಗುತ್ತಿಲ್ಲ. ಸಾಹಿತಿಯಾದ ವನು ಯಾವುದಕ್ಕೂ ಅಂಜದೆ ಅಳುಕದೆ ತನ್ನ ಚಿಂತನೆಗಳನ್ನು ಮುಕ್ತವಾಗಿ ಅಕ್ಷರ ರೂಪದಲ್ಲಿ ದಾಖಲಿಸಿ ಎಂದು ಕರೆ ನೀಡಿದರು.

ಸಮ್ಮೇಳನಾಧ್ಯಕ್ಷರಾದ ಎಂ.ನಂಜಯ್ಯನವರು ಮಾತನಾಡಿ ತುಮಕೂರು ತಾಲ್ಲೂಕು ಸಾಹಿತ್ಯ ಮತ್ತು ಕಲೆಗಳ ತವರೂರಾಗಿದ್ದು ಇಲ್ಲಿನ ಪ್ರಾಚೀನ ಕಲೆಗಳೆಲ್ಲಾ ನಗರೀಕರಣದ ಪ್ರಭಾವಕ್ಕೆ ಒಳಗಾಗಿ ಆಧುನಿಕತೆಯ ಮೆರುಗನ್ನು ಪಡೆದುಕೊಂಡಿವೆ. ಈ ಭಾಗದ ಚಿಟ್ಟಿಮೇಳ, ವೀರಗಾಸೆ, ಮೇಳೇಹಳ್ಳಿಯ ನಾಟಕ ತಂಡಗಳು ಇನ್ನೂ ನಮ್ಮಲ್ಲಿ ಕಲೆಗಳು ಜೀವಂತವಾಗಿರುವುದನ್ನು ತೋರಿಸುತ್ತವೆ. ಕೋರಾ ಮಹಾನಾಡಪ್ರಭುಗಳ ಕೇಂದ್ರವಾಗಿ ಇತಿಹಾಸಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡಿದ್ದು, ಇಂದು ಈ ಊರಿನಲ್ಲಿ ಐತಿಹಾಸಿಕ ಕುರುಹುಗಳು ಒಂದೂ ಕಾಣುತ್ತಿಲ್ಲ. ಐತಿಹಾಸಿಕ ಕುರುಹುಗಳನ್ನು ಸಂಗ್ರಹಿಸಿ ಅದಕ್ಕೆ ಒಂದು ವಸ್ತು ಸಂಗ್ರಹಾಲಯವನ್ನು ನಿರ್ಮಿಸಿದರೆ ಭವಿಷ್ಯದ ಜನಾಂಗಕ್ಕೆ ನಮ್ಮ ಕಲಾ ಪರಂಪರೆಯನ್ನು ಕೊಂಡೊಯ್ಯಬಹುದು ಎಂದರು.

ನಿಕಟಪೂರ್ವ 6ನೇ ಸಮ್ಮೇಳನಾಧ್ಯಕ್ಷರಾದ ಪ್ರೊ. ಕೋ.ರಂ.ಬಸವರಾಜು ಧ್ವಜ ಹಸ್ತಾಂತರಿಸಿದರು. ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಆಶಯ ನುಡಿಗಳನ್ನಾಡಿದರು. ಬೆಳ್ಳಾವಿ ಕಾರದ ಮಠದ ಕಾರದ ವೀರಬಸವ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ವೇದಿಕೆಯಲ್ಲಿ ನಾಟಕ ಅಕಾಡೆಮಿ ಸದಸ್ಯ ರವೀಂದ್ರ ಸಿರಿವರ, ಅಪ್ಪಗೆರೆ ತಿಮ್ಮರಾಜು, ಕಾರ್ಯದರ್ಶಿ ಡಾ. ಡಿ.ಎನ್.ಯೋಗೀಶ್ವರಪ್ಪ, ಸ್ವಾಗತ ಸಮಿತಿ ಅಧ್ಯಕ್ಷರಾದ ಕೆ.ಸಿ.ನರಸಿಂಹ ಮೂರ್ತಿ, ಚಿಕ್ಕಬೆಳ್ಳಾವಿ ಶಿವಕುಮಾರ್ ಹಾಜರಿದ್ದರು.

ಮಧ್ಯಾಹ್ನ ನಡೆದ ಗೋಷ್ಠಿಯಲ್ಲಿ ಕೋ.ರಂ.ಬಸವರಾಜು ಸಮ್ಮೇಳನಾಧ್ಯಕ್ಷರ ಸಾಹಿತ್ಯಾವಲೋಕನ, ಡಾ. ಬಿ.ನಂಜುಂಡಸ್ವಾಮಿಯವರು ಕೋರಾದ ಸ್ಥಳೀಯ ಸಂಸ್ಕೃತಿ, ಶ್ವೇತಾರಾಣಿ ಶಿಕ್ಷಣ ನಗರದಿಂದ ಕೈಗಾರಿಕಾ ನಗರದತ್ತ ತುಮಕೂರು. ಡಾ. ಶಿವಣ್ಣ ಬೆಳವಾಡಿ ಜಾನಪದ ಕಲೆ ಮತ್ತು ಸಾಹಿತ್ಯದ ಮೇಲೆ ನಗರದ ಪ್ರಭಾವ ಕುರಿತು ಪ್ರಬಂಧಗಳನ್ನು ಮಂಡಿಸಿದರು. ಡಾ. ಸಿದ್ಧಲಿಂಗಯ್ಯ ಅಧ್ಯಕ್ಷತೆ ವಹಿಸಿದ್ದರು. ಆನಂತರ ಡಾ. ಲಕ್ಷ್ಮಣದಾಸ್ ಅಧ್ಯಕ್ಷತೆಯಲ್ಲಿ ರಂಗಭೂಮಿ ಕುರಿತ ಗೋಷ್ಠಿ ನಡೆಯಿತು. ಎಂ.ವಿ.ನಾಗಣ್ಣ ಪ್ರಬಂಧ ಮಂಡಿಸಿದರು. ಸುಗುಣಾದೇವಿ ಅಧ್ಯಕ್ಷತೆಯಲ್ಲಿ ಕವಿಗೋಷ್ಠಿ ನಡೆಯಿತು. ಕಮಲಾ ರಾಜೇಶ್ ಉದ್ಘಾಟಿಸಿದರು. 15 ಜನ ಕವಿಗಳು ಕವಿತೆ ವಾಚಿಸಿದರು. ಎಂ.ಜಿ.ಸಿದ್ಧರಾಮಯ್ಯನವರ ಗಮಕ ವ್ಯಾಖ್ಯಾನ ಕಾರ್ಯಕ್ರಮ ನಡೆಸಿಕೊಟ್ಟರು.

## ಜಿಲ್ಲೆಯಲ್ಲಿ ಹಕ್ಕಿಜ್ವರ ಪ್ರಕರಣ ವರದಿಯಾಗಿಲ್ಲ-ಶುಭ ಕಲ್ಯಾಣ್

ತುಮಕೂರು: ಚಿಕ್ಕಬಳ್ಳಾಪುರ ಹಾಗೂ ಬಳ್ಳಾರಿ ಜಿಲ್ಲೆಯಲ್ಲಿ ಹಕ್ಕಿಜ್ವರ (Bird Flu) ದೃಢಪಟ್ಟಿರುವ ಬಗ್ಗೆ ವರದಿ ಯಾಗಿದ್ದು, ಜಿಲ್ಲೆಯಲ್ಲಿ ಈವರೆಗೂ ಹಕ್ಕಿಜ್ವರದ ಯಾವುದೇ ಪ್ರಕರಣ ವರದಿಯಾಗಿಲ್ಲ ಎಂದು ಜಿಲ್ಲಾಧಿ ಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.



ನೆರೆಯ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಕ್ಕಿಜ್ವರದ ರೋಗೋದ್ರೇಕವಿರುವುದರಿಂದ ಶಿರಾ ತಾಲ್ಲೂಕು ಕಗ್ಗಲಡು ಗ್ರಾಮ ಸೇರಿದಂತೆ ಜಿಲ್ಲೆಯಲ್ಲಿ ವಲಸೆ ಪಕ್ಷಿಗಳು ಬರುವ ಸ್ಥಳದಲ್ಲಿ ನಿಗಾವಹಿಸಲಾಗಿದೆ. ಕೋಳಿಗಳು ಸತ್ತರೆ ಪಶುಪಾಲನಾ ಇಲಾಖೆ ಗಮನಕ್ಕೆ ತರಬೇಕೆಂದು ಜಿಲ್ಲೆಯ ಎಲ್ಲಾ ಕೋಳಿ ಫಾರಂ ಮಾಲೀಕರಿಗೆ ಸೂಚಿಸಲಾಗಿದೆ. ಹಳ್ಳಿಗಳಲ್ಲಿ ಕೋಳಿಗಳು ಸತ್ತರೆ ತಕ್ಷಣವೇ ಪ್ರಯೋಗಾಲಯಕ್ಕೆ ಕಳುಹಿಸಲು ಪಶುಪಾಲನಾ ಇಲಾಖೆಗೆ ಸೂಚಿಸಲಾಗಿದೆ.

ಜಿಲ್ಲೆಯಲ್ಲಿ ಹಕ್ಕಿಜ್ವರ ನಿಯಂತ್ರಣ ಮಾಡಲು ಜಿಲ್ಲಾ ಮಟ್ಟದಲ್ಲಿ ತಾಂತ್ರಿಕ ಅಧಿಕಾರಿ ಡಾ॥ ನಾಗಮಣಿ ಅವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಕ್ಷಿಪ್ರ ಕಾರ್ಯಾಚರಣೆ ಪಡೆ (Rapid Response Team) ಹಾಗೂ ಒಬ್ಬ ಪಶುವೈದ್ಯ, ಇಬ್ಬರು ತಾಂತ್ರಿಕ ಸಿಬ್ಬಂದಿ ಹಾಗೂ ಇಬ್ಬರು ಡಿ ದರ್ಜೆ ನೌಕರರನ್ನೊಳಗೊಂಡ 64 ತಂಡಗಳನ್ನು ರಚಿಸಲಾಗಿದೆ.

ಜಿಲ್ಲೆಯಲ್ಲಿ ಹಕ್ಕಿಜ್ವರದ ರೋಗೋದ್ರೇಕ ಕಂಡು ಬಂದರೆ ಅವಶ್ಯಕತೆಯಿರುವ PPE Kits, ರಾಸಾಯನಿಕಗಳು ಲಭ್ಯವಿದ್ದು, ರೋಗವನ್ನು ನಿಯಂತ್ರಿಸಲು ಈಗಾಗಲೇ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಕೋಳಿಗಳು ಅಸ್ವಾಭಾವಿಕವಾಗಿ ಮರಣ ಹೊಂದಿದರೆ 24/7 ಕಾರ್ಯನಿರ್ವಹಿಸುವ ಕಾಲ್ ಸೆಂಟರ್ ಸಂಖ್ಯೆ 7304975519 ಅಥವಾ 0816-2213400ಗೆ ಕರೆ ಮಾಡಿ ಮಾಹಿತಿ ನೀಡಬೇಕುಎಂದು ಜಿಲ್ಲಾ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪ ನಿರ್ದೇಶಕ(ಆಡಳಿತ) ಡಾ॥ ಜಿ.ಗಿರೀಶ್ ಬಾಬುರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಖಾತಾ ಮಾಡಿಕೊಂಡು ಸರ್ಕಾರದ ಅನುಕೂಲ ಪಡೆದುಕೊಳ್ಳಿ': ಶಾಸಕ ಹೆಚ್.ವಿ.ವೆಂಕಟೇಶ್



ಪಾವಗಡ: ನಗರ ಪ್ರದೇಶಗಳಲ್ಲಿ ತಮ್ಮ ಆಸ್ತಿಯನ್ನು ಭದ್ರಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಇ-ಖಾತಾ ಆಂದೋಲನವನ್ನು ಕೈಗೊಂಡಿದ್ದು, ಈ ನಿಟ್ಟಿನಲ್ಲಿ ನಗರದ ನಾಗರಿಕರು ಇ-ಖಾತೆಗಳನ್ನು ಮಾಡಿಸಿಕೊಂಡು ತಮ್ಮ ಆಸ್ತಿಗಳನ್ನು ಭದ್ರಮಾಡಿಕೊಳ್ಳಿ ಎಂದು ಪಾವಗಡ ಶಾಸಕ ಎಚ್. ವಿ .ವೆಂಕಟೇಶ್ ತಿಳಿಸಿದರು.

ಪಟ್ಟಣದ ಪುರಸಭೆಯ ಆವರಣದಲ್ಲಿ ಸುಮಾರು 450 ಫಲಾನುಭವಿಗಳಿಗೆಶನಿವಾರ ಹಮ್ಮಿಕೊಂಡಿದ್ದ ಬಿ-ಖಾತಾ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಬಿ-ಖಾತಾ ಪ್ರಮಾಣ ಪತ್ರ ವಿತರಿಸಿ ಮಾತನಾಡಿ,ಅನೇಕ ವರ್ಷಗಳಿಂದ ಖಾತಾ ಆಗಿರಲಿಲ್ಲ ಈ ನಿಟ್ಟಿನಲ್ಲಿ ಸರ್ಕಾರದ ಮೇಲೆ ಎಲ್ಲಾ ಶಾಸಕರು ಒತ್ತಡ ತಂದು ಖಾತಾ ಮಾಡಿಸಲು ಕ್ರಮ ವಹಿಸಲಾಗಿದ್ದು ಈ ಸಂದರ್ಭದಲ್ಲಿ ಖಾತಾ ಮಾಡಿಸಿಕೊಳ್ಳಲು ಜನ ಆಸಕ್ತಿ ತೋರಬೇಕು ಪಾವಗಡದಲ್ಲಿ ಸದ್ಯ ಬೆರಳೆಣಿಕೆಯಷ್ಟು ಜನ ಮಾತ್ರ ಅರ್ಜಿ ಸಲ್ಲಿಸಿದ್ದಾರೆ, ಎಂಬ ಮಾಹಿತಿ ಲಭ್ಯವಾಗಿದೆ ಈ ಅವಕಾಶ ಕೇವಲ ಮೂರು ತಿಂಗಳು ಮಾತ್ರ ಇದ್ದು ಜನರು ಸದುಪಯೋಗ ಪಡಿಸಿಕೊಳ್ಳಬೇಕೆಂದಿದ್ದಾರೆ

ಪುರಸಭಾಧ್ಯಕ್ಷ ಪಿ .ಎಚ್. ರಾಜೇಶ್ ಮಾತನಾಡಿ, ಪಾವಗಡ ಪಟ್ಟಣದ ಪ್ರಮುಖ ಬಡಾವಣೆಗಳಿಗೆ ಪುರಸಭೆಯಿಂದ ಸೌಲಭ್ಯ ನೀಡಲಾಗುತ್ತಿದ್ದು, ಈ ಹಿಂದೆ ಖಾತಾ ಸಮಸ್ಯೆಗಳಿಂದ ರೊಪ್ಪ ಗ್ರಾಮ ಪಂಚಾಯಿತಿಯಲ್ಲಿ ಖಾತೆಗಳನ್ನು ಮಾಡಿಸಿಕೊಂಡಿದ್ದು, ಮತ್ತು ಶಾಂತಿನಗರ, ಬನಶಂಕರಿ, ವಿನಾಯಕ ನಗರ, ಭಾಗಗಳ ಕೆಲವೊಂದು ನಿವೇಶನಗಳು ಗ್ರಾಮ ಪಂಚಾಯಿತಿಯಲ್ಲಿ ನೋಂದಣಿಯಾಗಿದ್ದು ಜಿಲ್ಲಾಧಿಕಾರಿಗಳ ಮತ್ತು ಅಧಿಕಾರಿಗಳ ಸಮನ್ವಯತೆಯಿಂದ ಪಾವಗಡ ಪುರಸಭೆಗೆ ಹಸ್ತಾಂತರಿಸಲು ಸೂಚಿಸಲು ಶಾಸಕರಿಗೆ ಮನವಿ ಮಾಡಿದರು

ಪುರಸಭಾ ಸದಸ್ಯ ಮಹಮ್ಮದ್ ಇಮ್ರಾನ್ ಮಾತನಾಡಿದರು ಕಾರ್ಯಕ್ರಮದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುದೇಶ್ ಬಾಬು, ಪುರಸಭಾ ಸದಸ್ಯರಾದ ಕಲ್ಪವೃಕ್ಷ ರವಿ, ವೇಲ್ ರಾಜು, ರಾಮಾಂಜಿನಪ್ಪ, ಗೊರ್ತಿ ನಾಗರಾಜ್, ಬಾಲಸುಬ್ರಮಣ್ಯಂ, ನಾಗಭೂಷಣ್ ರೆಡ್ಡಿ, ಸಿ ಎನ್ ರವಿ, ವಿಜಯ್ ಕುಮಾರ್, ರಾಮಾಂಜಿನಪ್ಪ, ರಾಮಲಿಂಗ, ಶ್ರೀನಿವಾಸ್ ಪ್ರಸಾದ್, ಗಂಗಾಧರ್, ರಿಯಾಜ್, ಮುಖಂಡರಾದ ಹನುಮಂತಪ್ಪ, ಪೊಟ್ಟು ಗೋವಿಂದಪ್ಪ, ಪುರಸಭಾ ಮುಖ್ಯ ಅಧಿಕಾರಿ ಜಾಫರ್ ಷರೀಫ್, ಆರೋಗ್ಯಧಿಕಾರಿ ಶಂಶುದ್ದಾ, ಸಮುದಾಯ ಸಂಘಟಿತ ಅಧಿಕಾರಿ ಭಾಗ್ಯಮ್ಮ, ಲೆಕ್ಕಾಧಿಕಾರಿ ಹರೀಶ್ ಸೇರಿದಂತೆ ಫಲಾನುಭವಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ತೊರೆಮಾವಿನಹಳ್ಳಿಯಲ್ಲಿ ಚಿರತೆ ಪ್ರತ್ಯಕ್ಷ; ಆತಂಕದಲ್ಲಿ ಗ್ರಾಮಸ್ಥರು

ತುರುವೇಕೆರೆ: ರಾತ್ರಿ ವೇಳೆ ಮನೆ ಮುಂದೆ ಹಾಕಲಾಗಿದ್ದ ತೆಂಗಿಕಾಯಿ ರಾಶಿಯಲ್ಲಿ ಮಲಗಿದ್ದ ನಾಯಿ ಮೇಲೆ ಚಿರತೆ ದಾಳಿ ನಡೆಸಿ ಹೊತ್ತೊಯ್ದಿರುವ ಘಟನೆ ತಾಲ್ಲೂಕಿನ ತೊರೆಮಾವಿನಹಳ್ಳಿ ಗ್ರಾಮದಲ್ಲಿ ನಡೆದಿದೆ.



ತಾಲ್ಲೂಕಿನ ಆನೇಕೆರೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ತೊರೆಮಾವಿನಹಳ್ಳಿ ಗ್ರಾಮದ ಕಲ್ಲೇಶ್ವರಸ್ವಾಮಿ ದೇವಾಲಯದ ಸಮೀಪವಿರುವ ಶಂಕರಪ್ಪ ಎಂಬುವರ ಮನೆ ಮುಂದೆ ತೆಂಗಿನ ಕಾಯಿ ರಾಶಿ ಹಾಕಲಾಗಿತ್ತು. ಈ ತೆಂಗಿನ ರಾಶಿ ಪಕ್ಕದಲ್ಲೇ ಇವರು ಸಾಕಿದ್ದ ನಾಯಿ ಮಲಗಿತ್ತು. ಮಧ್ಯರಾತ್ರಿ ಇದನ್ನು ಹೊಂಚು ಹಾಕಿರುವ ಚಿರತೆ ನಿಧಾನವಾಗಿ ಸದ್ದುಗದ್ದಲ ಇಲ್ಲದೆ ಮೆಲ್ಲನೆ ಹೋಗಿ ನಾಯಿ ಮೇಲೆ ದಾಳಿ ಮಾಡಿ ಹೊತ್ತುಕೊಂಡು ಹೋಗಿರುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.


ಗ್ರಾಮದ ಹೃದಯಭಾಗಕ್ಕೆ ಚಿರತೆ ನುಗ್ಗಿ ಮನೆ ಮುಂದೆ ಮಲಗಿದ್ದ ನಾಯಿಯನ್ನು ಹೊತ್ತುಕೊಂಡು ಹೋಗಿರುವುದರಿಂದ ಗ್ರಾಮಸ್ಥರು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ. ರಾತ್ರಿ ಮತ್ತು ಹಗಲು ವೇಳೆ ಗ್ರಾಮದ ಹೊರ ಭಾಗದಲ್ಲಿ ಜಮೀನುಗಳು, ತೋಟಗಳಿಗೆ ಹೋಗಲು ರೈತರು ಹಿಂದೇಟು ಹಾಕುವಂತಾಗಿದೆ.

ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ಇತ್ತಕಡೆ ಗಮನ ಹರಿಸಿ ಈ ಭಾಗದ ಜನರ ನಿದ್ದೆಗೆಡಿಸಿರುವ ಚಿರತೆಯನ್ನು ಸೆರೆ ಹಿಡಿಯಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

## ಅಡಚಣೆಗಳಿಲ್ಲದೆ ಆರಂಭವಾಯಿತು ದ್ವಿತೀಯ ಪಿಯುಸಿ ಪರೀಕ್ಷೆ

### ತುಮಕೂರು ಮಧುಗಿರಿ ವಿಭಾಗದಲ್ಲಿ 35 ಪರೀಕ್ಷಾ ಕೇಂದ್ರಗಳು | ಡೀಸಿ-ಎಸ್ಪಿ ಪರಿಶೀಲನೆ

ತುಮಕೂರು: ಜಿಲ್ಲೆಯಲ್ಲಿ ಮಾರ್ಚ್ 1ರ ಶನಿವಾರದಿಂದ ದ್ವಿತೀಯ ಪಿಯುಸಿ ಪರೀಕ್ಷೆ ಪ್ರಾರಂಭವಾಗಿದ್ದು, ಪರೀಕ್ಷೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ತಿಳಿಸಿದರು.



ಜಿಲ್ಲಾ ಪಂಚಾಯತಿ ಭೌಗೋಳಿಕ ಮಾಹಿತಿ ಕೇಂದ್ರದಲ್ಲಿ ಶನಿವಾರ ವೆಬ್‌ಕಾಸ್ಟಿಂಗ್ ವ್ಯವಸ್ಥೆಯನ್ನು ಪರಿಶೀಲಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 35 ಕೇಂದ್ರಗಳಲ್ಲಿ ಮಾರ್ಚ್ 1 ರಿಂದ 20ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ವ್ಯವಸ್ಥಿತವಾಗಿ ಯಾವುದೇ ಅಕ್ರಮಗಳಿಗೆ ಅವಕಾಶ ನೀಡದಂತೆ ನಡೆಸಲು ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇರಿಸಲು 40 ಗಣಕಯಂತ್ರಗಳನ್ನು ವ್ಯವಸ್ಥೆ ಮಾಡಲಾಗಿದ್ದು, 40 ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಪೊಲೀಸ್ ಕಣ್ಗಾವಲಿನಲ್ಲಿ ಪ್ರತೀ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆಗಳನ್ನು ತಲುಪಿಸಲು ಪ್ರತಿ ತಾಲ್ಲೂಕಿನಲ್ಲಿ ಭದ್ರತಾ ಕೊಠಡಿಗಳನ್ನು ಸ್ಥಾಪಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಮೇಲುಸ್ತುವಾರಿಗಾಗಿ ಮೇಲುಸ್ತುವಾರಿ ಅಧಿಕಾರಿ, ಪ್ರತೀ ಪರೀಕ್ಷಾ ಕೊಠಡಿಗೆ ಮೇಲ್ವಿಚಾರಕರು, ಸ್ಕ್ವಾಡ್, ಪೊಲೀಸ್ ಹಾಗೂ ಆರೋಗ್ಯ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಹೇಳಿದರು.

ದ್ವಿತೀಯ ಪಿಯುಸಿ ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸಲು ಪ್ರಸಕ್ತ ವರ್ಷ ಜಿಲ್ಲಾ ಪಂಚಾಯತಿಯಲ್ಲಿ ಕಣ್ಗಾವಲು ಕೇಂದ್ರವನ್ನು ತೆರೆಯಲಾಗಿದ್ದು, ಪರೀಕ್ಷೆ ಮುಕ್ತಾಯವಾಗುವವರೆಗೂ ಈ ಕೇಂದ್ರ ಕಾರ್ಯನಿರ್ವಹಿಸಲಿದೆ. ಕಣ್ಗಾವಲು ವ್ಯವಸ್ಥೆಯಡಿ ಪರೀಕ್ಷಾ ಕೊಠಡಿಗಳ ಮೇಲೆ ಸೂಕ್ಷ್ಮವಾಗಿ ನಿಗಾ ಇಡಲಾಗುವುದು. ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಅಗತ್ಯ ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಾಲಗುರುಮೂರ್ತಿ ಮಾತನಾಡಿ, ಜಿಲ್ಲೆಯಲ್ಲಿ ಶನಿವಾರ ಮೊದಲ ದಿನ ಕನ್ನಡ ಭಾಷಾ ಪರೀಕ್ಷೆ ನಡೆದಿದ್ದು, ಕನ್ನಡ ಭಾಷಾ ಪರೀಕ್ಷೆಗೆ 22,502 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 21,560 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ ಉಳಿದಂತೆ 942 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ವೆಬ್ ಕಾಸ್ಟಿಂಗ್ ವ್ಯವಸ್ಥೆಯ ನೋಡಲ್ ಅಧಿಕಾರಿ ಗೋಪಾಲ್, ವೆಬ್ ಕಾಸ್ಟಿಂಗ್ ನಿಯೋಜಿತ ಸಿಬ್ಬಂದಿ, ಮತ್ತಿತರರು ಉಪಸ್ಥಿತರಿದ್ದರು.



ತುಮುಲ್ ಅಧ್ಯಕ್ಷರು ಹಾಗು ಶಾಸಕರಾದ ಹೆಚ್ ವಿ ವೆಂಕಟೇಶ್ ಗುಬ್ಬಿ ಪಶುಆಹಾರ ಘಟಕಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಕೆ ಎಮ್ ಎಫ್ ನಿರ್ದೇಶಕ ಕಾಂತರಾಜು ತುಮುಲ್ ನಿರ್ದೇಶಕರುಗಳಾದ ಬಿ ನಾಗೇಶ ಬಾಬು. ಪ್ರಕಾಶ್..ತುಮುಲ್ ಮತ್ತು ಪಶು ಅಹಾರ ಘಟಕದ. ಅಧಿಕಾರಿಗಳು ಹಾಜರಿದ್ದರು

## ಬರಗೂರು ರಾಮಚಂದ್ರಪ್ಪ ಅವರಿಗೆ 'ಕಲ್ಪತರು ರತ್ನ' ಪ್ರಶಸ್ತಿ ಪ್ರದಾನ ನಾಳೆ



ತಿಪಟೂರಿನ: ಕಲ್ಪತರು ವಿದ್ಯಾಸಂಸ್ಥೆ, ಮತ್ತು ಸತ್ಯಕುಮಾರ್ ರಿಲೀಫ್ ಫೌಂಡೇಶನ್ ಇವರ ಸಂಯುಕ್ತಾಶ್ರಯದಲ್ಲಿ ಕಲಾಕೃತಿಯ 28 ನೇ ವರ್ಷದ ವಾರ್ಷಿಕೋತ್ಸವ ಹಾಗೂ ಅನ್ನಪೂರ್ಣ ಸಂಚಾರಿ ನಿತ್ಯ ಅನ್ನ ದಾಸೋಹದ ಒಂದು ವರ್ಷ ಕಾರ್ಯಕ್ರಮದ ಅಂಗವಾಗಿ ಸಾಮಾಜಿಕ ಚಿಂತಕ, ನಾಡೋಜ ಬರಗೂರು ರಾಮಚಂದ್ರಪ್ಪ 'ಕಲ್ಪತರು ರತ್ನ' ಪ್ರಶಸ್ತಿಯನ್ನು ಮಾರ್ಚ್ 3 ಸೋಮವಾರ ಬೆಳಗ್ಗೆ 10.30 ಕ್ಕೆ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದ ಕೆ.ಐ.ಟಿ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ ಎಂದು ಕಲಾಕೃತಿ ಸಂಘದ ಅಧ್ಯಕ್ಷ ಡಾ.ಶ್ರೀಧರ್ ತಿಳಿಸಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಸಕ ಕೆ.ಷಡಕ್ಷರಿ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಕಲ್ಪತರು ವಿದ್ಯಾಸಂಸ್ಥೆಯ ಅಧ್ಯಕ್ಷ ಪಿ.ಕೆ. ತಿಪ್ಪೇರುದ್ರಪ್ಪ ನೆರವೇರಿಸಲಿದ್ದಾರೆ ಎಂದು ತಿಳಿಸಿದರು.

## ಪಡಿತರದಾರರಿಗೆ ಹೆಚ್ಚುವರಿ ಆಹಾರ ಧಾನ್ಯ ವಿತರಣೆ : ಫೆಬ್ರವರಿಯಿಂದ ಜಾರಿ

ತುಮಕೂರು: ಅನ್ನಭಾಗ್ಯ ಯೋಜನೆಯಡಿ ಫೆಬ್ರವರಿ ಮಾಹೆಯಿಂದ ಜಾರಿಗೆ ಬರುವಂತೆ ನೇರ ನಗದು ವರ್ಗಾವಣೆ ಬದಲಾಗಿ ಅರ್ಹ ಫಲಾನುಭವಿ ಗಳಿಗೆ 5 ಕೆ.ಜಿ. ಹೆಚ್ಚುವರಿ ಅಕ್ಕಿಯನ್ನು ವಿತರಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ. ಸರ್ಕಾರದ ಆದೇಶದನ್ವಯ ಸಾರ್ವಜನಿಕ ವಿತರಣಾ ಪದ್ಧತಿಯಡಿ ಆದ್ಯತಾ ಪಡಿತರ ಚೀಟಿ ಫಲಾನುಭವಿಗಳಿಗೆ ಫೆಬ್ರವರಿ ಮಾಹೆಯಿಂದ ಅನ್ವಯವಾಗುವಂತೆ 5 ಕೆ.ಜಿ. ಹೆಚ್ಚುವರಿ ಅಕ್ಕಿಯನ್ನು ಬಿಡುಗಡೆ ಮಾಡಲಾಗುವುದು

ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ. ಅಕ್ಕಿ, 4 ಮತ್ತು 4ಕ್ಕಿಂತ ಹೆಚ್ಚಿನ ಸದಸ್ಯರುಗಳ ಪಡಿತರ ಚೀಟಿಗಳಲ್ಲಿನ ಪ್ರತಿ ಫಲಾನುಭವಿಗೆ 5 ಕೆ.ಜಿ. ಹೆಚ್ಚುವರಿ ಅಕ್ಕಿ ಹಂಚಿಕೆ ಮಾಡಲಾಗುವುದು. ಆದ್ಯತಾ ಪಡಿತರ ಚೀಟಿ(ಬಿಪಿಎಲ್)ಯ ಪ್ರತಿ ಸದಸ್ಯರಿಗೆ 5 ಕೆ.ಜಿ. ಹಾಗೂ 5 ಕೆ.ಜಿ. ಹೆಚ್ಚುವರಿ ಅಕ್ಕಿಯನ್ನು ಹಂಚಿಕೆ ಮಾಡಲಾಗುವುದು.


ಈ ಪಡಿತರ ಧಾನ್ಯ ಪ್ರಮಾಣವನ್ನು ಫೆಬ್ರವರಿ ಹಾಗೂ ಮಾರ್ಚ್ ಮಾಹೆಗಾಗಿ ಪ್ರತ್ಯೇಕವಾಗಿ ವಿತರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

## ಅಪರಿಚಿತ ವ್ಯಕ್ತಿ ಶವ ಪತ್ತೆ

ತುಮಕೂರು: ಕೋರ ಪೊಲೀಸ್ ಠಾಣಾ ವ್ಯಾಪ್ತಿ ಸೀಬಿ ನರಸಿಂಹಸ್ವಾಮಿ ದೇವಸ್ಥಾನದ ಹಿಂಭಾಗ ರಸ್ತೆ ಬದಿಯ ಚರಂಡಿಯ ಬಳಿ ಫೆಬ್ರವರಿ 23ರಂದು ಸುಮಾರು 45 ವ?ದ ಅಪರಿಚಿತ ವ್ಯಕ್ತಿಯ ಶವವೊಂದು ಪತ್ತೆಯಾಗಿದ್ದು, ವಾರಸುದಾರರು ಯಾರೆಂದು ತಿಳಿದು ಬಂದಿರುವುದಿಲ್ಲ.

ಮೃತನು 169 ಸೆಂ.ಮೀ. ಎತ್ತರ, ಕಪ್ಪು ಮೈಬಣ್ಣ ಹೊಂದಿದ್ದು, ಎದೆಯ ಮೇಲೆ ಗಂಗ ಎಂದು ಹಚ್ಚೆ ಇರುತ್ತದೆ. ಈತನ ಮೈಮೇಲೆ ಮಾಸಲು ಬಣ್ಣದ ತುಂಬು ತೋಳಿನ ಬನಿಯನ್ ಇರುತ್ತದೆ. ಮೃತನ ವಾರಸುದಾರರು ಯಾರಾದರೂ ಇದ್ದಲ್ಲಿ ಕೋರ ಪೊಲೀಸ್ ಠಾಣೆ ದೂ.ವಾ.ಸಂ. 0816–2242006/ 2272340/ 2275301/ 2278000 ಅಥವಾ ಮೊ.ಸಂ.9480802949–31–20–00 ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

## ದೊಂಬರಹಟ್ಟಿ ಶ್ರೀ ಶನೇಶ್ವರಸ್ವಾಮಿ ಪುಣ್ಯಕ್ಷೇತ್ರದಲ್ಲಿ ಶ್ರೀಗಳಿಂದ ವಿಶೇಷ ಪೂಜೆ



ಕುಣಿಗಲ್: ದೊಂಬರಹಟ್ಟಿ ಶ್ರೀ ಶನೇಶ್ವರಸ್ವಾಮಿ ಪುಣ್ಯಕ್ಷೇತ್ರಕ್ಕೆ ಎಲೆರಾಮಪುರದ ಕುಂಚಿಟಿಗರ ಮಹಾಸಂಸ್ಥಾನ ಮಠದ ಶ್ರೀ ಡಾ. ಹನುಮಂತನಾಥ ಸ್ವಾಮೀಜಿ ಭೇಟಿ ನೀಡಿ ಶ್ರೀ ಶನೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು.

ತಾಲೂಕಿನ ಯಡಿಯೂರು ಹೋಬಳಿ ದೊಂಬರಟ್ಟಿ ಶ್ರೀ ಶನೇಶ್ವರ ಸ್ವಾಮಿ ಪುಣ್ಯಕ್ಷೇತ್ರಕ್ಕೆ ಎಲೆರಾಮಪುರ ಕುಂ ಚೀಟಿಗರ ಮಠದ ಡಾ. ಶ್ರೀ ಹನುಮಂತನಾಥ ಸ್ವಾಮೀಜಿ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ಮಾತನಾಡುತ್ತ ಪವಿತ್ರ ಪುಣ್ಯ ಕ್ಷೇತ್ರಗಳಲ್ಲಿ ಒಂದಾದ ದೊಂಬರಹಟ್ಟಿ ಪುಣ್ಯಕ್ಷೇತ್ರವು ಶೈಕ್ಷಣಿಕವಾಗಿ ಧಾರ್ಮಿಕವಾಗಿ ತಾಲೂಕು ಹಾಗೂ ಜಿಲ್ಲೆಯಲ್ಲಿ ಒಂದಾಗಿದ್ದು ವಿಶಿಷ್ಟವಾಗಿ ಜನರ ನಂಬಿಕೆ ಕಷ್ಟ ಸುಖ ಬಗೆಹರಿಸುವಂತಹ ಪುಣ್ಯ ತಾಣವಾಗಿದ್ದು ಲಿಂಗೈಕ್ಯರಾದ ಶ್ರೀ ಗಂಗರಾಜು ಸ್ವಾಮೀಜಿಯವರ ಮಾರ್ಗದರ್ಶನದಲ್ಲಿ ಶಿವರಾತ್ರಿ ಹಬ್ಬದಂದು ಶ್ರೀ ಕ್ಷೇತ್ರದಲ್ಲಿ ಪ್ರತಿವರ್ಷವು ಭಕ್ತರ ಸಮ್ಮುಖದಲ್ಲಿ ಆಚರಿಸಿಕೊಂಡು ಬರಲಾಗುತ್ತಿದ್ದು ಕ್ಷೇತ್ರದಲ್ಲಿ ದಾಸೋಹ ಮೂಲಭೂತ ಸೌಲಭ್ಯ ಅತಿಥಿ ಗೃಹಗಳು ಸೇರಿದಂತೆ ದೇವಸ್ಥಾನಕ್ಕೆ ಭಕ್ತರು ಉದಾರವಾಗಿ ಸಹಾಯ ಹಸ್ತ ನೀಡುವ ಮೂಲಕ ಜೀರ್ಣೋದ್ಧಾರ ಕೈಗೊಳ್ಳಬೇಕು ದೇವಾಲಯಗಳು ಧಾರ್ಮಿಕ ಕೇಂದ್ರವಾಗಿ ರೂಪಿತಗೊಂಡು ಭಕ್ತರಿಗೆ ಶಾಂತಿ ನೆಮ್ಮದಿ ದೊರಕಲಿ ಎಂದು ಆಶಿಸಿರು.

ಶ್ರೀ ಕ್ಷೇತ್ರದ ಧರ್ಮಾಧಿಕಾರಿ ಆನಂದ ಸ್ವಾಮೀಜಿ ಮಾತನಾಡುತ್ತಾ ನಾಡಿನ ಸಕಲ ಭಕ್ತರು ಜೀವರಾಶಿಗಳಿಗೆ ಒಳ್ಳೆಯದಾಗಲಿ ಎಂದು ಬಯಸುತ್ತಾ ಪ್ರತಿ ವರ್ಷವೂ ಮಹಾ ಶಿವರಾತ್ರಿ ಹಬ್ಬದಂದು ನಾಡಿನಾದ್ಯಂತ ಸಾವಿರಾರು ಭಕ್ತರು ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗುತ್ತಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶ್ರೀ ಹರೆಶಂಕರ ಮಠದ ಶ್ರೀ ಸಿದ್ದರಾಮಯ್ಯ ಚೈತನ್ಯ ಸ್ವಾಮೀಜಿ, ಅರ್ಚಕರಾದ ಕುಮಾರಸ್ವಾಮಿ ಉಪಸ್ಥಿತರಿದ್ದರು.

# ಕಾರ್ಮಿಕರ ಕನಿಷ್ಠ ವೇತನಕ್ಕೆ ಆಗ್ರಹ; ನಾಳೆಯಿಂದ ಫ್ರೀಡಂ ಪಾರ್ಕ್‌ನಲ್ಲಿ ಅಹೋರಾತ್ರಿ ಧರಣಿ




ತುಮಕೂರು: ಸುಪ್ರಿಂಕೋರ್ಟಿನ ಆದೇಶದ ಅನ್ವಯ ಎಲ್ಲಾ ವರ್ಗದ ಕಾರ್ಮಿಕರಿಗೆ ಕನಿಷ್ಠ ವೇತನ ಹೆಚ್ಚಳ, ಕರ್ನಾಟಕ ಕಾರ್ಮಿಕರ ಸಮ್ಮೇಳನ ಆಯೋಜನೆ, ಸಮಾನಕೆಲಸಕ್ಕೆ ಸಮಾನ ವೇತನ ಇನ್ನಿತರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸಿಐಟಿಯು ನೇತೃತ್ವದಲ್ಲಿ ಮಾರ್ಚ 03ರಿಂದ 07ರವರೆಗೆ ಬೆಂಗಳೂರಿನ ಫ್ರಿಡಂಪಾರ್ಕಿನಲ್ಲಿ ಆಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಸಿಐಟಿಯು ಜಿಲ್ಲಾಧ್ಯಕ್ಷ ಸೈಯದ್ ಮುಜೀಬ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಆಹೋರಾತ್ರಿ ಧರಣಿಯ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು,ಮಾರ್ಚ್ 3ರಂದು ಗ್ರಾಮ ಪಂಚಾಯಿತಿ ಕಾರ್ಮಿಕರು, ಮಾರ್ಚ್ 4ರಂದು ಅಕ್ಷರ ದಾಸೋಹ ಕಾರ್ಮಿಕರು, ಮಾರ್ಚ್ 5ರಂದು ಕಟ್ಟಡ ನಿರ್ಮಾಣ ಕಾರ್ಮಿಕರು, ಮಾರ್ಚ್ 6ರಂದು ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಖಾಯಂ ಹಾಗು ಗುತ್ತಿಗೆ ಕಾರ್ಮಿಕರು ಮತ್ತು ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಅಸಂಘಟಿತ ಕಾರ್ಮಿಕರು, ಸಾರಿಗೆ ಕಾರ್ಮಿಕರಾದ ಆಟೋ, ಟ್ಯಾಕ್ಸಿ ಚಾಲಕರು ಹೋರಾಟ ದಲ್ಲಿ ಭಾಗವಹಿಸುತ್ತಿದ್ದಾರೆ ಮತ್ತು ಮಾರ್ಚ್ 7ರಂದು ಅಂಗನವಾಡಿ ಕಾರ್ಮಿಕರು ಈ ಬೃಹತ್ ಅಹೋರಾತ್ರಿ ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ. ಸುಮಾರು 1ಲಕ್ಷಕ್ಕೂ ಅಧಿಕ ಕಾರ್ಮಿಕರು ಈ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುತಿದ್ದು, ತುಮಕೂರು ಜಿಲ್ಲೆಯಿಂದ ಸುಮಾರು 5 ಸಾವಿರ ಜನರು ಪಾಲ್ಗೊಳ್ಳಲಿದ್ದಾರೆ ಎಂದರು.

ಕರ್ನಾಟಕ ರಾಜ್ಯದ ಕಾರ್ಮಿಕರ ಹಲವು ಪ್ರಮುಖ ಬೇಡಿಕೆಗಳು ಧೀರ್ಘ ಕಾಲದಿಂದ ಇತ್ಯರ್ಥವಾಗದೇ ಉಳಿದಿದೆ. ಶ್ರಮಶಕ್ತಿಯ ಸಮರ್ಪಕ ನಿರ್ವಹಣೆ ಹಾಗು ಶ್ರಮಿಕರನ್ನು ಮಾರುಕಟ್ಟೆಯ ಚಟುವಟಿಕೆಗಳಲ್ಲಿ ಸಕ್ರೀಯ ಪಾಲುವಹಿಸುವಂತೆ ಮಾಡಲು ಅಗತ್ಯ ವಿತ್ತ ಕ್ರಮಗಳನ್ನು ರಾಜ್ಯ ಸರಕಾರ ತೆಗೆದುಕೊಳ್ಳುವ ಅಗತ್ಯವಿದೆ.ರಾಜ್ಯ ಸರಕಾರವು ಪ್ರಗತಿಶೀಲ ಹಾಗು ಬಹುಸಂಖ್ಯೆಯಲ್ಲಿನ ಶ್ರಮಜೀವಿಗಳನ್ನು ಒಳಗೊಳ್ಳುವ ಆರ್ಥಿಕ ನೀತಿಗಳನ್ನು ಜಾರಿಗೆ ತರುತ್ತದೆಂಬ ರಾಜ್ಯದ ಕಾರ್ಮಿಕರ ನಿರೀಕ್ಷೆಯು ಲೋಕಸಭಾ ಚುನಾವಣೆಗಳ ನಂತರದಲ್ಲಿ ರಾಜ್ಯ ಸರಕಾರ ತೆಗೆದುಕೊಳ್ಳುತ್ತಿರುವ ತೀರ್ಮಾನಗಳಿಂದ ಹುಸಿಯಾಗುತ್ತಿದೆ ಎಂದರು.

ಸಿಐಟಿಯು ಜಿಲ್ಲಾ ಖಜಾಂಚಿ ಎ.ಲೋಕೇಶ್ ಮಾತನಾಡಿ,ಬಿಜೆಪಿ ನೇತೃತ್ವದ ರಾಜ್ಯ ಸರಕಾರವು ಕಾರ್ಮಿಕ ಕಾನೂನುಗಳಲ್ಲಿ ಜಾರಿ ಮಾಡಿದ ಮಾರಕ ತಿದ್ದುಪಡಿಗಳನ್ನು ಕಾಂಗ್ರೆಗಿ ನೇತ್ರತ್ವದರಾಜ್ಯ ಸರಕಾರವು ಮುಂದು ವರಿಸುತ್ತಿದೆ. ಕೃಷಿ ಕ್ಷೇತ್ರದಲ್ಲಿಯು ಎಪಿಎಂಸಿ ಕಾಯಿದೆಗಳಲ್ಲಿ ಬಿಜೆಪಿ ಸರಕಾರವು ಜಾರಿಗೆ ತಂದಿದ್ದ ರೈತವಿರೋಧಿ ತಿದ್ದುಪಡಿಗಳನ್ನು ಕಾಂಗ್ರೆಸ್ ಸರಕಾರವು ಹಿಂಪಡೆಯದೆ ಜನರಿಗೆ ನೀಡಿದೆ ಭರವಸೆಗಳನ್ನು ಹುಸಿ ಮಾಡಿದೆ.ಈ ಹಿನ್ನೆಲೆಯಲ್ಲಿ ಎಲ್ಲಾ ದುಡಿಯುವ ಜನರ ಹಕ್ಕುಗಳನ್ನು ನಾಶಮಾಡುವ ಬಂಡವಾಳ ವರ್ಗಗಳ ಪರವಾದ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ರದ್ದುಗೊಳಿಸಬೇಕು. ಅದಲ್ಲದೇ ಸಂಘಟಿತ, ಅಸಂಘಟಿತ, ಪತ್ರಿಕಾ ಉದ್ಯಮ, ಗುತ್ತಿಗೆ ಹಾಗು ಖಾಯಮೇತರ ಕಾರ್ಮಿಕರ ವಿವಿಧ ಬೇಡಿಕೆಗಳು, ಸರಕಾರಿ ಯೋಜನೆಗಳಲ್ಲಿ ಕೆಲಸ ಮಾಡುವ ಅಂಗನವಾಡಿ, ಬಿಸಿಯೂಟ ಕಾರ್ಮಿಕರ ಬೇಡಿಕೆಗಳು, ರೈತರಿಗೆ ಬೆಂಬಲ ಬೆಲೆ ಸೇರಿದಂತೆ ಕೃಷಿರಂಗದ ಬೇಡಿಕೆಗಳು, ಶಿಕ್ಷಣವನ್ನು ಖಾಸಗೀಕರಣ ಮಾಡುವ ಮೂಲಕ ದುಬಾರಿ ಮಾಡುವ ಹೊಸ ಶಿಕ್ಷಣ ನೀತಿಗಳ ವಿರೋಧಿಸುವ ಹಾಗು ಜನಪರ ಶಿಕ್ಷಣ ನೀತಿಗಳ ಜಾರಿಯ ಬೇಡಿಕೆಗಳನ್ನು ಒಳಗೊಂಡಂತೆ 37 ಬೇಡಿಕೆಗಳನ್ನು ಮುಂದಿಟ್ಟು ಈ ಅಹೋರಾತ್ರಿ ಧರಣಿಯನ್ನು ನಡೆಸಲಾಗುತ್ತಿದೆ ಎಂದರು.

ಸಿಐಟಿಯು ಪ್ರಧಾನ ಕಾರ್ಯದರ್ಶಿ ಜಿ.ಕಮಲ ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಸಿಐಟಿಯು ಅಂಗನವಾಡಿ ನೌಕರರ ಸಂಘದ ಗುಲ್ಜಾರ್ ಭಾನು, ಅಕ್ಷರ ದಾಸೋಹ ನೌಕರರ ಸಂಘಟನೆಯ ನಾಗರತ್ನ, ಮೊದಲಾದವರು ಭಾಗವಹಿಸಿದ್ದರು.

## ರಾಗಿ ಖರೀದಿ ಕೇಂದ್ರ : ಮಾ.3 ರಿಂದ ಖರೀದಿ ಪ್ರಕ್ರಿಯೆ ಆರಂಭ

ತುಮಕೂರು: ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ರಾಗಿ ಖರೀದಿಸಲು ಈಗಾಗಲೇ ಜಿಲ್ಲೆಯಲ್ಲಿ 11 ರಾಗಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ಖರೀದಿ ಕೇಂದ್ರದಲ್ಲಿ ಮಾರ್ಚ್ 3 ರಿಂದ ರಾಗಿಯನ್ನು ರೈತರಿಂದ ಖರೀದಿಸುವ ಪ್ರಕ್ರಿಯೆ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಜಿಲ್ಲೆಯ ಕುಣಿಗಲ್, ತಿಪಟೂರು, ತುರುವೇಕೆರೆ, ಹುಳಿಯಾರು, ಚಿ.ನಾ.ಹಳ್ಳಿ, ಗುಬ್ಬಿ, ಮಧುಗಿರಿ, ತುಮಕೂರು, ಶಿರಾ, ಕೊರಟಗೆರೆ(ಹೊಸದಾಗಿ ತೆರೆಯಲಾಗಿದೆ)ಯಲ್ಲಿ ತಲಾ 1 ಹಾಗೂ ಕುಣಿಗಲ್‌ನಲ್ಲಿ 2 ಸೇರಿದಂತೆ ಒಟ್ಟು 11 ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಕ್ರೀಡಾ ಪಟುಗಳಿಗೆ ಶುಲ್ಕ; ಸಿ.ಪಿ.ಐ(ಎಂ) ವಿರೋಧ

ತುಮಕೂರು ನಗರ ಕ್ರೀಡಾಂಗಣದಲ್ಲಿ ವಾಯು ವಿಹಾರಗಳಿಗೆ ಹಾಗು ಅಭ್ಯಾಸ ಮಾಡುವ ಕ್ರೀಡಾಪಟುಗಳಿಗೆ ಶುಲ್ಕ ವಿಧಿಸಿರುವ ಜಿಲ್ಲಾ ಆಡಳಿತ ನಡೆಯುವುದು ರಾಜ್ಯ ಸರ್ಕಾರದ ನೀತಿಗಳ ಭಾಗವಾಗಿರುವುದು. ರಾಜ್ಯದ ನೀತಿಯನ್ನು ಹಾಗು ಜಿಲ್ಲಾ ಆಡಳಿತ ಧರ ನಿಗಧಿ ಮಾಡಿರುವುದನ್ನು ಭಾರತ ಕಮ್ಯೂನಿಷ್ಟ್ (ಮಾರ್ಕ್ಸ್‌ವಾದಿ) ತುಮಕೂರು ಜಿಲ್ಲಾ ಸಮಿತಿ ತೀವ್ರವಾಗಿ ಖಂಡಿಸಿದೆ. ಇದು ಬಡ ಕ್ರೀಡಾ ಪಟುಗಳಿಗೆ ಪ್ರೋತ್ಸಹ ನೀಡುವ ಬದಲು ಹೋರೆ ಹೊರಿಸುವ ಈ ನಡೆ ಸಮರ್ಥನಿಯವಲ್ಲ ಎಂದಿರುವ –ಸಿ.ಪಿ.ಐ(ಎಂ) ಈ ಬಗ್ಗೆ ತನ್ನ ವಿರೋಧವನ್ನು ವ್ಯಕ್ತ ಪಡಿಸಿದೆ. ಬಡ ಮಕ್ಕಳು ಕ್ರೀಡೆಗಳಿಂದ ದೂರ ಮಾಡುವ ಈ ನಡೆ ಹಿಂಪ ಪಡೆಯುವಂತೆ –ಸಿ.ಪಿ.ಐ(ಎಂ) ಜಿಲ್ಲಾಡಳಿತವನ್ನು ಒತ್ತಾಯಿಸಿದೆ.

# ತುಂತುರು ನೀರಾವರಿ ಅಳವಡಿಕೆಯಿಂದ ಕೃಷಿಯಲ್ಲಿ ಬಹಳಷ್ಟು ನೀರಿನ ಉಳಿತಾಯ



ಶಿರಾ: ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಚಿಕ್ಕನಹಳ್ಳಿ ಮತ್ತು ಅಟಲ್ ಭೂಜಲ ಯೋಜನೆ ವತಿಯಿಂದ ಕೊರಟಗೆರೆ ತಾಲ್ಲೂಕಿನ ಕುರಂ ಕುಂಟೆ ಗ್ರಾಮ ಪಂಚಾಯಿತಿಯ ರೈತರಿಗೆ ಅಟಲ್ ಭೂಜಲ ಯೋಜನೆಯಡಿ ಸಮುದಾಯ ಸಹಭಾಗಿತ್ವದೊಂದಿಗೆ ಅಂತರ್ಜಲ ನಿರ್ವಹಣೆ, ಜಲ ಭದ್ರತಾ ಯೋಜನೆ ಸಿದ್ಧಪಡಿಸುವುದು ಮತ್ತು ನೀರಿನ ಬೇಡಿಕೆ ಕಡಿಮೆ ಮಾಡುವ ಸೂಕ್ಷ್ಮ ನೀರಾವರಿ ತಾಂತ್ರಿಕತೆಗಳ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಮಾವಿನಕುರಿಕೆ ಗ್ರಾಮದಲ್ಲಿ ಆಯೋಜಿಸಲಾಗಿತ್ತು.

ತರಬೇತಿ ಕಾರ್ಯಕ್ರಮ ಸಸಿಗೆ ನೀರೆರೆಯುವ ಮೂಲಕ ಡಿಎಟಿಸಿ ಸಹಾಯಕ ಕೃಷಿ ನಿರ್ದೇಶಕ ವಿಜಯ ಮೂರ್ತಿ, ಸಹಾಯಕ ಕೃಷಿ ನಿರ್ದೇಶಕಿ ಸುಮ, ಅಟಲ್ ಭೂಜಲ ಯೋಜನೆಯ ರಾಜ್ಯ ಕಾರ್ಯಕ್ರಮ ನಿರ್ವಹಣಾ ಘಟಕದ ಐಇಸಿ ತಜ್ಞರಾದ ಹೇಮಾ ಪ್ರಸನ್ನ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ತಿಮ್ಮಕ್ಕ ಉದ್ಘಾಟಿಸಿದರು.

ಡಿಪಿಎಂಯುನ ಐಇಸಿ ತಜ್ಞರಾದ ಗುರುಶಿವ ಅವರು ನೀರಿನ ಮಹತ್ವ, ಜಲ ಭದ್ರತಾ ಯೋಜನೆ ತಯಾರಿಸುವ ಹಂತಗಳ ಬಗೆಗಿನ ಮಾಹಿತಿ ನೀಡಿ ಭೂಮಿಯ ಮೇಲಿನ ಶೇ.70 ರಷ್ಟು ನೀರಿನಲ್ಲಿ ಬಳಕೆಗೆ ಸಿಗುವುದು ಶೇಕಡ 2 ಮಾತ್ರ, ನೀರಿನ ಮಿತ ಬಳಕೆಗೆ ಒತ್ತು ನೀಡುವುದು. ಮುಂದಿನ ಪೀಳಿಗೆಗೆ ಪರಿಸರ ಸಮತೋಲನಕ್ಕೆ ಪಶು ಪಕ್ಷಿಗಳ ಸಂರಕ್ಷಣೆಗೆ ನೀರು ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ, ಅಟಲ್ ಭೂಜಲ್ ಯೋಜನೆ ಅಡಿ ನೀಡುತ್ತಿರುವ ತುಂತುರು ನೀರಾವರಿ ಅಳವಡಿಕೆಯಿಂದ ಕೃಷಿಯಲ್ಲಿ ಶೇಕಡ 30 ರಿಂದ 40 ರಷ್ಟು ನೀರಿನ ಉಳಿತಾಯವಾಗುತ್ತದೆ ಎಂದರು.

ಅಟಲ್ ಭೂಜಲ ಯೋಜನೆಯ ರಾಜ್ಯ ಕಾರ್ಯಕ್ರಮ ನಿರ್ವಹಣಾ ಘಟಕದ ಐಇಸಿ ತಜ್ಞರಾದ ಹೇಮಾ ಪ್ರಸನ್ನ ಅವರು ಮಾತನಾಡಿ ಮಳೆಯಾಶ್ರಿತ ಪ್ರದೇಶದಲ್ಲಿ ರೈತರು ಮಳೆಯ ನೀರನ್ನು ಕಂದಕ ಬದು ಕೃಷಿ ಹೊಂಡಗಳು ನಾಲ ಬದು, ಚೆಕ್ ಡ್ಯಾಮ್ ನಿರ್ಮಿಸಿಕೊಳ್ಳುವ ಮೂಲಕ ನೀರು ಭೂಮಿಗೆ ಹಿಂಗಿಸುವ ಪ್ರಯತ್ನ ಮಾಡಬಹುದು ಎಂದರು.

ಸಹಾಯಕ ಕೃಷಿ ಅಧಿಕಾರಿ ರಾಜಶೇಖರ್ ಮಾತನಾಡಿ ನೈಸರ್ಗಿಕ ಕೃಷಿ ಅಳವಡಿಕೆಯಿಂದ ಮಣ್ಣು ಮತ್ತು ನೀರಿನ ಸಂರಕ್ಷಣೆ ಮಾಡುವುದು ಸಾವಯುವ ಹೊದಿಕೆ ಪದ್ಧತಿ ಅಳವಡಿಸಿಕೊಂಡು ನೀರು ಹಾವಿಯಾಗುವುದನ್ನು ನಿಯಂತ್ರಿಸಬಹುದು ಎಂದ ಅವರು ಈ ಎಲ್ಲಾ ಕ್ರಮಗಳನ್ನು ಅಳವಡಿಸಿಕೊಂಡು ಶುದ್ಧ ನೀರು ಮತ್ತು ಆರೋಗ್ಯಕರ ಆಹಾರ ಮುಂದಿನ ಪೀಳಿಗೆಗೆ ನೀಡ ಲು ಎಲ್ಲ ರೈತರೂ ಬದ್ಧರಾಗಬೇಕು ಎಂದರು.

## ಮಾ.22ರ ಕರ್ನಾಟಕ ಬಂದ್ ಹಿನ್ನೆಲೆ;
# ಯಾವುದೇ ಪರೀಕ್ಷೆ ಮುಂದೂಡಲ್ಲ: ಸಚಿವರ ಸ್ಪಷ್ಟನೆ

ಬೆಂಗಳೂರು : ಬೆಳಗಾವಿಯಲ್ಲಿ ಕಂಡಕ್ಟರ್ ಮೇಲೆ ಹಲ್ಲೆಯನ್ನು ಖಂಡಿಸಿ, ಇದೇ ಮಾರ್ಚ್ 22 ರಂದು ಅಖಂಡ ಕರ್ನಾಟಕ ಬಂದ್ ಗೆ ಕನ್ನಡಪರ ಸಂಘಟನೆಗಳು ಕರೆ ನೀಡಿವೆ. ಆದರೆ ಇದೇ ವೇಳೆ ರಾಜ್ಯದಲ್ಲಿ 7, 8 ಹಾಗೂ 9ನೇ ತರಗತಿ ವಿದ್ಯಾರ್ಥಿಗಳ ಪರೀಕ್ಷೆ ನಡೆಯುತ್ತಿದ್ದು, ಯಾವುದೇ ಕಾರಣಕ್ಕೂ ಪರೀಕ್ಷೆ ಮುಂದೂಡಲು ಸಾಧ್ಯವಿಲ್ಲ ಎಂದು ಸಚಿವ ಮಧು ಬಂಗಾರಪ್ಪ ಸ್ಪಷ್ಟನೆ ನೀಡಿದರು.

ಈ ಕುರಿತು ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಮಾರ್ಚ್ ತಿಂಗಳಿನಲ್ಲಿ 7 8 ಹಾಗೂ 9ನೇ ತರಗತಿ ವಿದ್ಯಾರ್ಥಿಗಳ ಪರೀಕ್ಷೆಗಳು ನಡೆಯುತ್ತಿವೆ. ಮಾರ್ಚ್ 22ರಂದು ಕೂಡ ಪರೀಕ್ಷೆ ಇದ್ದು ಕರ್ನಾಟಕ ಬಂದ್ ಮಾಡುವ ಸಲುವಾಗಿ ಪರೀಕ್ಷೆಗಳನ್ನು ಮುಂದೂಡಲು ಸಾಧ್ಯವಿಲ್ಲ. ಈಗಾಗಲೇ ವೇಳಾಪಟ್ಟಿ ಸಿದ್ಧಪಡಿಸಲಾಗಿದ್ದು ಮಕ್ಕಳ ಹಿತ ದೃಷ್ಟಿಯಿಂದ ಪರೀಕ್ಷೆಗಳನ್ನು ಯಾವುದೇ ಕಾರಣಕ್ಕೂ ಮುಂದೂಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಇನ್ನು 1ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲು ಮಗುವಿಗೆ 6 ವರ್ಷವಾಗಿರಬೇಕು ಎಂಬ ನಿಯಮದಲ್ಲಿ ಯಾವುದೇ ಸಡಿಲಿಕೆ ಸಾಧ್ಯವಿಲ್ಲ.ಅನೇಕರು ಈ ಬಗ್ಗೆ ಕೋರ್ಟ್ ಗೆ ಹೋಗಿದ್ದಾರೆ. ಕೋರ್ಟ್ ಕೂಡ ಅವರ ಅರ್ಜಿ ವಜಾಗೊಳಿಸಿದೆ. ಕೋರ್ಟ್ ತೀರ್ಪು ಏನು ನೀಡಲಿದೆ ಹಾಗೆ ನಡೆದುಕೊಳ್ಳುತ್ತೇವೆ ಎಂದು ಹೇಳಿದರು. 6 ವರ್ಷ ತುಂಬಲು ಒಂದು ತಿಂಗಳು, ಎರಡು ತಿಂಗಳು ಕಡಿಮೆಯಿದ್ದರೆ ಒಂದು ಮಗುವಿಗೆ ಅವಕಶ ಕೊಟ್ಟರೆ ಮತ್ತೊಬ್ಬರು ಕೇಳುತ್ತಾರೆ. 1ನೇ ತರಗತಿ ದಾಖಲಾತಿ ಮಾಡಿಕೊಳ್ಳಲು 6 ವರ್ಷವಾಗಿರಬೇಕು ಎಂಬುದು ಕಡ್ಡಾಯ. ನಿಯಮವನ್ನು ನಾವು ಪಾಲಿಸಲೇಬೇಕು. ಈ ವಿಚಾರ ಕೋರ್ಟ್ ನಲ್ಲಿರುವುದರಿಂದ ಕೋರ್ಟ್ ತೀರ್ಮಾನ ಕೈಗೊಂಡಂತೆ ನಾವು ಪಾಲಿಸುತ್ತೇವೆ ಎಂದರು.

# ಜನರ ದುಡ್ಡನ್ನು ಜನರಿಗೆ ಕೊಡುವುದೇ ಗ್ಯಾರೆಂಟಿ ಯೋಜನೆ



ಹುಳಿಯಾರು: ಜನರ ಕಟ್ಟಿದ್ದ ತೆರಿಗೆ ಹಣವನ್ನು ಜನರ ಖಾತೆಗೆ ಮಧ್ಯವರ್ತಿಗಳ ಹಾವಳಿ, ಭ್ರಷ್ಟಾಚಾರ ಇಲ್ಲದೆ ನೇರವಾಗಿ ಹಾಕುವುದೇ ಗ್ಯಾರೆಂಟಿ ಯೋಜನೆ ಎಂದು ಚಿಕ್ಕನಾಯಕನಹಳ್ಳಿ ತಾಲೂಕು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಸಿ.ಡಿ.ಚಂದ್ರಶೇಖರ್ ತಿಳಿಸಿದರು.

ಹುಳಿಯಾರು ಹೋಬಳಿಯ ದಬ್ಬಗುಂಟೆ ಸಮೀಪದ ತಮ್ಮಣ್ಣ ಸ್ವಾಮಿ ಜಾತ್ರೆಗೆ ಶುಕ್ರವಾರ ರಾತ್ರಿ ಆಗಮಿಸಿದ್ದ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಂದ ಗೌರವ ಸ್ವೀಕರಿಸಿ ಮಾತನಾಡಿ ಮಹಿಳೆಯರು ಆರ್ಥಿಕವಾಗಿ ಸಬಲರಾದರೆ ಕುಟುಂಬ ನಿರ್ವಹಣೆ ಸಾಧ್ಯ ಎನ್ನುವ ಕಾರಣಕ್ಕೆ ಸರ್ಕಾರ ಸ್ತ್ರೀಯರಿಗೆ ಗ್ಯಾರೆಂಟಿ ಯೋಜನೆ ಫಲಾನುಭವಿಗಳನ್ನಾಗಿ ಮಾಡಿದೆ. ಇದಕ್ಕೆ ನಿದರ್ಶನವಾಗಿ ಗೃಹಲಕ್ಷ್ಮಿ ಯೋಜನೆಯ ಹಣದಿಂದ ಕೊಳವೆಬಾವಿ ಕೊರೆಸಿರುವ, ಫ್ಯಾನ್ಸಿ ಸ್ಟೋರ್ ತೆರೆದಿರುವ, ಶಾಲೆಗ ಕೊಡುಗೆ ಕೊಟ್ಟಿರುವ, ಎಮ್ಮೆ, ಹಸು ಖರೀಧಿಸಿ ಹೈನುಗಾರಿಕೆ ಮಾಡುತ್ತಿರುವು ದಾಗಿದೆ ಎಂದು ಹೇಳಿದರು.

ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಗೃಹಲಕ್ಷ್ಮೀ ಯೋಜನೆಯಲ್ಲಿ 54 ಸಾವಿರ ಕುಟುಂಬಕ್ಕೆ 10.8 ಕೋಟಿ ರೂ. ಬಂದಿದೆ. 56,731 ಮನೆಗಳಲ್ಲಿ ಗೃಹಜ್ಯೋತಿ ಯೋಜನೆ 54,732 ಮನೆಗಳು ನೋಂದಾಯಿಸಿದ್ದು ಅಂದಾಜು ಇಲ್ಲಿಯವರೆವಿಗೆ 29 ಕೋಟಿ ರೂ. ಬೆಸ್ಕಾಂಗೆ ಬಂದಿದೆ. ಯುವನಿಧಿಯಲ್ಲಿ 324 ಮಂದಿ ನೊಂದಾಯಿಸಿದ್ದು 26 ಲಕ್ಷ ರೂ ಬಂದಿದೆ. ಶಕ್ತಿ ಯೋಜನೆಯಲ್ಲಿ ಚಿಕ್ಕನಾಯಕನಹಳ್ಳಿಗೆ 75 ಕೋಟಿ ರೂ. ಡಿಸೆಂಬರ್ ವರೆವಿಗೆ ಮಹಿಳೆಯರು ಬಸ್‌ನಲ್ಲಿ ಸಂಚರಿಸಿದ್ದಾರೆ. ಅನ್ನಭಾಗ್ಯ ಯೋಜನೆಯಲ್ಲಿ ಡಿಸೆಂಬರ್ ವರೆವಿಗೆ ಒಟ್ಟು 48 ಕೋಟಿ ರೂ. ನಗದು ಜಮೆ ಮಾಡಲಾಗಿದೆ. ಮಾರ್ಚ್‌ನಿಂದ ನಗದು ಬದಲಿಗೆ ಪ್ರತಿ ವ್ಯಕ್ತಿಗೆ 10 ಕೆಜಿ ಅಕ್ಕಿ ವಿತರಿಸಲಾಗುವುದು ಎಂದು ವಿವರಿಸಿದರು.

ಗ್ಯಾರೆಂಟಿ ಯೋಜನೆಯನ್ನು ವಿಶ್ವಸಂಸ್ಥೆ ಹೊಗಳಿದೆ. ಗ್ಯಾರಂಟಿ ಯೋಜನೆಗಳನ್ನು ಮಾದರಿಯಾಗಿ ಪರಿಗಣಿಸಿ ಮಧ್ಯಪ್ರದೇಶ, ಜಾರ್ಖಂಡ್, ಮಹಾರಾಷ್ಟ್ರ, ರಾಜಸ್ಥಾನ, ದೆಹಲಿ, ಒಡಿಶಾ ಸೇರಿದಂತೆ ಹಲವು ರಾಜ್ಯಗಳಲ್ಲಿ ಜಾರಿ ಮಾಡಲಾಗಿದೆ. ಜಿಡಿಪಿ ಏರಿಕೆಯಲ್ಲಿ ರಾಜ್ಯದ ಗ್ಯಾರೆಂಟಿ ಪಾಲು ಹೆಚ್ಚಿದೆ. ನೇರವಾಗಿ ಜನರಿಗೆ ನೆರವಾಗುತ್ತಿರುವ ಹಾಗೂ ದೇಶಕ್ಕೆ ಮಾದರಿಯಾಗಿರುವ ಯೋಜನೆಯ ಯಶಸ್ಸಿನ ಬಗ್ಗೆ ವಿರೋಧ ಪಕ್ಷದವರು ಹೊಟ್ಟೆಕಿಚ್ಚಿನಿಂದ ಅಪಪ್ರಚಾರ ಮಾಡತ್ತಿದ್ದಾರೆ. ಜನರು ಅಪಪ್ರಚಾರಗಳಿಗೆ ಕಿವಿಕೊಡಬಾರದೆಂದು ಮನವಿ ಮಾಡಿದರು.

ಹುಳಿಯಾರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಿಕ್ಕಣ್ಣ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪ್ರಮೀಣಮ್ಮ, ಸೇವಾದಳ ರಾಜ್ಯ ಸಂಘಟನಾ ಕಾರ್ಯದರ್ಶಿ ಕೃಷ್ಣೇಗೌಡ, ಬಗರ್ ಹುಕುಂ ಸಮಿತಿ ಸದಸ್ಯ ಕಿಲಾರದಹ್ಳಿ ಮಂಜುನಾಥ್, ತಾಲೂಕು ಓಬಿಸಿ ಉಪಾಧ್ಯಕ್ಷ ವಿಜಯ ರಾಘವೇಂದ್ರ, ಎಪಿಎಂಸಿ ಮಾಜಿ ನಿರ್ದೇಶಕ ದಬ್ಬಗುಂಟೆ ಶ್ರೀನಿವಾಸ್ ಸೇರಿದಂತೆ ಅನೇಕರಿದ್ದರು.

## ಬೀದಿ ನಾಟಕ ಕಲಾತಂಡಗಳಿಂದ ಅರ್ಜಿ

ತುಮಕೂರು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ರಾಷ್ಟ್ರೀಯ ಆರೋಗ್ಯ ಅಭಿಯಾನದ ಕಾರ್ಯಕ್ರಮಗಳ ಯೋಜನೆ ಮತ್ತು ಸೇವೆಗಳ ಕುರಿತು ಜನಜಾಗೃತಿ ಮೂಡಿಸಲು ಜಿಲ್ಲೆಯ ಜಾನಪದ/ಬೀದಿ ನಾಟಕ ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಿದೆ. ಪ್ರತಿ ಬೀದಿ ನಾಟಕ ಜಾನಪದ ಕಲಾತಂಡದಲ್ಲಿ ಇಬ್ಬರು ಮಹಿಳಾ ಕಲಾವಿದರು ಸೇರಿದಂತೆ 8 ಮಂದಿ ಸ್ಥಳೀಯ ಕಲಾವಿದರಿರಬೇಕು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಐಇಸಿ ವಿಭಾಗ, ತುಮಕೂರು ಇವರಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಮಾರ್ಚ್ 6ರೊಳಗೆ ಸಲ್ಲಿಸಬೇಕೆಂದು ಕೋರಲಾಗಿದೆ.




ತುಮಕೂರಿನಲ್ಲಿ ಬಿಜೆಪಿ ಪಕ್ಷದ ವತಿಯಿಂದ ರಾಜ್ಯ ಸರ್ಕಾರ ಗ್ಯಾರಂಟಿ ಹೆಸರಲ್ಲಿ ದಲಿತರಿಗೆ ಮೋಸ, ದಲಿತರ ಹಣಕ್ಕೆ ಕನ್ನ ಹಾಕುತ್ತಿದೆ ಎಂದು ಆರೋಪಿಸಿ ಬೃಹತ್ ಜನಾಂದೋಲನ ನಡೆಸಿ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ರವರಿಗೆ ಮನವಿ ಸಲ್ಲಿಸಲಾಯಿತು. ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್, ಮಾಜಿ ಸಂಸದ ಮುನಿಸ್ವಾಮಿ, ಶಾಸಕ ಜ್ಯೋತಿಗಣೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ರವಿಶಂಕರ್ ಹೆಬ್ಬಾಕ ಸೇರಿದಂತೆ ಬಿಜೆಪಿ ಮುಖಂಡರು, ಕಾರ್ಯಕರ್ತರುಗಳು ಭಾಗವಹಿಸಿದ್ದರು.




ಬೆಂಗಳೂರಿನ ಎಫ್ ಕೆ ಸಿ ಸಿ ಐ ಕ್ಯಾಬಿನೆಟ್ ಹಾಲ್ ನಲ್ಲಿ ಆಯೋಜಿಸಲಾಗಿದ್ದ ಡಿಸ್ಟ್ರಿಕ್ ಕೋ ಆರ್ಡಿನೇಷನ್ ಕಮಿಟಿ ಮೀಟಿಂಗ್ ನಲ್ಲಿ ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವತಿಯಿಂದ ಭಾಗವಹಿಸಿ ಎಫ್ ಕೆ ಸಿ ಸಿ ಐ ಸೀನಿಯರ್ ವೈಸ್ ಪ್ರೆಸಿಡೆಂಟ್ ಶ್ರೀಮತಿ ಉಮಾ ರೆಡ್ಡಿಯವರಿಗೆ ತುಮಕೂರು ಜಿಲ್ಲೆಯು ಸರ್ವತೋಮುಖ ಅಭಿವೃದ್ಧಿ ಹೊಂದಲು ಹಾಗೂ ಕುಂದು ಕೊರತೆಗಳು ಹಾಗೂ ಬೇಡಿಕೆಗಳು ಹಾಗೂ ಇನ್ನಿತರ ವಿಚಾರಗಳ ಬಗ್ಗೆ ಚರ್ಚಿಸಿ ಮನವಿ ಪತ್ರವನ್ನು ಸಲ್ಲಿಸಲಾಯಿತು ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಪಿಆರ್ ಕುರಂದವಾಡ, ಕಾರ್ಯದರ್ಶಿಗಳಾದ ಟಿ ಎನ್ ಶ್ರೀಕಂಠ ಸ್ವಾಮಿ, ಮಾಜಿ ಅಧ್ಯಕ್ಷರಾದ ಸುಜ್ಞಾನ್ ಹಿರೇಮಠ್ ರವರು ಉಪಸ್ಥಿತರಿದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper